All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

26.07.2026 / 2.30 p.m.

<><><><>

ಮುಖ್ಯಾಂಶಗಳು

- ತಾಯಿಯ ಹೆಸರಲ್ಲಿ ಒಂದು ಸಸಿ ಅಭಿಯಾನಕ್ಕೆ ದೇಶಾದ್ಯಂತ ಅಭೂತಪೂರ್ವ ಸ್ಪಂದನೆ ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಸಂತಸ
- ದೇಶದ ಶೈಕ್ಷಣಿಕ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ - ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಭರವಸೆ
- ಇಂದು ಕಾರ್ಗಿಲ್ ವಿಜಯ್ ದಿವಸ ; ಯೋಧರ ಕುಟುಂಬಗಳ ಹಿತ ಕಾಯಲು ಸರ್ಕಾರ ಬದ್ಧ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ರಾಜ್ಯಾದ್ಯಂತ ಮುಂದುವರೆದ ಎಸ್‌ಐಆರ್ ಪ್ರಕ್ರಿಯೆ ; ಪ್ರಜಾಸತ್ತಾತ್ಮಕ ವ್ಯವಸ್ಥೆ ಬಲಪಡಿಸುವಲ್ಲಿ ಅಭಿಯಾನ ಮಹತ್ತರ ಪಾತ್ರ ; ಸಿ.ಟಿ.ರವಿ

<><><><>

'ತಾಯಿಯ ಹೆಸರಿನಲ್ಲಿ ಒಂದು ಸಸಿ' ಅಭಿಯಾನಕ್ಕೆ ದೇಶಾದ್ಯಂತ ದೊರೆತಿರುವ ಸ್ಪಂದನೆಗೆ ಪ್ರಧಾನಿ ನರೇಂದ್ರ ಮೋದಿ ಸಂತಸ ವ್ಯಕ್ತಪಡಿಸಿದ್ದಾರೆ. ಅಹಮದಾಬಾದ್‌ನಲ್ಲಿ ಒಂದು ಗಂಟೆಯೊಳಗೆ ೩.೫ ಲಕ್ಷಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ಗಿನ್ನೆಸ್ ದಾಖಲೆ ನಿರ್ಮಿಸಿರುವುದನ್ನು ಮನ್ ಕಿ ಬಾತ್‌ನಲ್ಲಿ ಅವರು ಪ್ರಸ್ತಾಪಿಸಿದ್ದಾರೆ. 'ಗಣೇಶ ಹಬ್ಬದ' ಸಂದರ್ಭದಲ್ಲಿ ಮಣ್ಣಿನಿಂದಲೇ ತಯಾರಿಸಿದ ಗಣೇಶ ಮೂರ್ತಿಗಳನ್ನು ಪೂಜಿಸಬೇಕೆಂದು ಪ್ರಧಾನಿ ಮನವಿ ಮಾಡಿದ್ದಾರೆ. ಕೈಮಗ್ಗದಲ್ಲಿ ತಯಾರಾಗುವ ಪ್ರತಿಯೊಂದು ಉಡುಪು ಒಂದಲ್ಲಾ ಒಂದು ಪ್ರದೇಶ, ಸಮುದಾಯ ಮತ್ತು ಇದರೊಂದಿಗೆ ಇರುವ ಅಸಂಖ್ಯಾತ ಜನರ ಶ್ರಮದ ಪ್ರತೀಕವಾಗಿದೆ. ಕರಕುಶಲ ವಸ್ತುಗಳನ್ನು ಪ್ರೋತ್ಸಾಹಿಸುವ ಮೂಲಕ ನಮ್ಮ ಸಹ ನೇಕಾರರನ್ನು ಗೌರವಿಸಬೇಕೆಂದು ಪ್ರಧಾನಿ ಹೇಳಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ 'ಖಾದಿ' ಬಹಳ ಜನಪ್ರಿಯವಾಗಿದೆ. ಕಳೆದ ೧೨ ವರ್ಷಗಳಲ್ಲಿ ಇದರ ಮಾರಾಟ ೭ ಪಟ್ಟು ಹೆಚ್ಚಾಗಿದೆ. ಈ ಮಾರಾಟದ ಅಂಕಿ ಅಂಶ ಈಗ ೮ ಸಾವಿರ ಕೋಟಿ ರೂಪಾಯಿ ತಲುಪಿದೆ. ಮುಂಬರುವ ಹಬ್ಬಗಳ ಸಮಯದಲ್ಲಿ ಖಾದಿ, ಕೈಮಗ್ಗ, ಕರಕುಶಲ ವಸ್ತುಗಳನ್ನು ಖರೀದಿಸುವಂತೆ ಪ್ರಧಾನಿ ಕರೆ ನೀಡಿದ್ದಾರೆ. ಈ ವರ್ಷವೂ ಹರ್ ಘರ್ ತಿರಂಗಾ - ಮನೆ ಮನೆಯಲ್ಲೂ ತ್ರಿವರ್ಣ ಧ್ವಜ ಅಭಿಯಾನವನ್ನು ಸಂಪೂರ್ಣ ಉತ್ಸಾಹ, ಉಲ್ಲಾಸದಿಂದ ಮುಂದುವರಿಸಬೇಕು. ಮನೆಗಳಲ್ಲಿ ಸಂಪೂರ್ಣ ಗೌರವದೊಂದಿಗೆ ತ್ರಿವರ್ಣ ಧ್ವಜ ಹಾರಿಸಬೇಕು ಎಂದು ಪ್ರಧಾನಿ ಹೇಳಿದ್ದಾರೆ. ನಾಳೆ ಭಾರತ ರತ್ನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ

ಅವರ ಪುಣ್ಯ ಸ್ಮರಣೆ ದಿನವಾಗಿದ್ದು, ಅವರ ವ್ಯಕ್ತಿತ್ವವು ಹಲವು ಸ್ಫೂರ್ತಿದಾಯಕ ಅಂಶಗಳನ್ನು ಹೊಂದಿತ್ತಾದರೂ, ಶಿಕ್ಷಕರ ಪಾತ್ರ ಅವರ ಹೃದಯಕ್ಕೆ ಅತ್ಯಂತ ನಿಕಟವಾಗಿತ್ತು ಎಂದು ಸ್ಮರಿಸಿದ್ದಾರೆ. ಈ ವಾರ 'ಗುರು ಪೂರ್ಣಿಮೆ'ಯ ಪವಿತ್ರ ಹಬ್ಬವನ್ನು ಆಚರಿಸುತ್ತಿದ್ದು, ತಾಯಿ ತಂದೆಯರೇ ನಮ್ಮ ಮೊದಲ ಗುರುಗಳು. ಗುರು ಪೂರ್ಣಿಮೆಯು ಎಲ್ಲಾ ಗುರುಗಳಿಗೆ ಕೃತಜ್ಞತೆ ವ್ಯಕ್ತಪಡಿಸುವ ಸಂದರ್ಭವಾಗಿದೆ. ದೇಶದ ಎಲ್ಲಾ ಶಿಕ್ಷಕರು ಮತ್ತು ಗುರುಗಳಿಗೆ ನಾನು ಗೌರವದಿಂದ ವಂದಿಸುತ್ತೇನೆ ಎಂದು ತಮ್ಮ ಮನದಾಳದ ಮಾತಿನಲ್ಲಿ ಹೇಳಿಕೊಂಡಿದ್ದಾರೆ.

<><><><>

ದೇಶದ ವಿದ್ಯಾರ್ಥಿ-ಯುವ ಜನರ ಉಜ್ವಲ ಭವಿಷ್ಯ ರೂಪಿಸುವ ಶೈಕ್ಷಣಿಕ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಕೇಂದ್ರದ ನೂತನ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಭರವಸೆ ವ್ಯಕ್ತಪಡಿಸಿದ್ದಾರೆ. ದೆಹಲಿಯಲ್ಲಿ ನೂತನ ಶಿಕ್ಷಣ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರ ಸಾರಥ್ಯದಲ್ಲಿ ೧೨ ವರ್ಷಗಳಿಂದಲೂ ಭಾರತದ ಶಿಕ್ಷಣ ವ್ಯವಸ್ಥೆ ಅಭೂತಪೂರ್ವ ಸುಧಾರಣೆ ಕಂಡಿದೆ. ಅವರ ಮಾರ್ಗದರ್ಶನದಲ್ಲಿ ಮತ್ತಷ್ಟು ಹೊಸ ಹೊಸ ಸುಧಾರಣಾ ಕ್ರಮಗಳು ಕಾರ್ಯರೂಪಕ್ಕೆ ಬರಲಿವೆ ಎಂದರು. ನೀಟ್ ವಿವಾದದಂತಹ ಪ್ರಸ್ತುತ ಸನ್ನಿವೇಶದಲ್ಲಿ ಪ್ರಧಾನಿ ಮೋದಿ ಅವರು ನಂಬಿಕೆಯಿಟ್ಟು ಶಿಕ್ಷಣ ಇಲಾಖೆಯ ಹೆಚ್ಚುವರಿ ಹೊಣೆಗಾರಿಕೆ ವಹಿಸಿದ್ದಾರೆ. ಎಲ್ಲರ ಸಹಕಾರದಲ್ಲಿ ಅತ್ಯಂತ ಜವಾಬ್ದಾರಿಯುತವಾಗಿ ಹೊಣೆ ನಿಭಾಯಿಸುತ್ತೇನೆಂದು ಹೇಳಿದರು. ಧರ್ಮೇಂದ್ರ ಪ್ರಧಾನ್ ಅವರು ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ಮೂಲಕ ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಆವಿಷ್ಕಾರ, ಕ್ರಾಂತಿಗೆ ನಾಂದಿ ಹಾಡಿದ್ದಾರೆ. ಅವರ ಅಗತ್ಯ ಸಲಹೆ, ಸಹಕಾರದೊಂದಿಗೆ ಮತ್ತಷ್ಟು ಸುಧಾರಣೆ ನೀತಿಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರ ನಿರೀಕ್ಷೆ ಜೊತೆಗೆ ವಿದ್ಯಾರ್ಥಿ-ಯುವಜನರ, ಸಮಗ್ರ ಶೈಕ್ಷಣಿಕ ವಲಯದ ಆಶೋತ್ತರಗಳಿಗೆ ತ್ವರಿತವಾಗಿ ಸ್ಪಂದಿಸುವ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಪ್ರಲ್ಹಾದ ಜೋಶಿ ಭರವಸೆ ನೀಡಿದ್ದಾರೆ.

<><><><>

ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ ದಿವಸ ಆಚರಿಸಲಾಗುತ್ತಿದೆ. ೧೯೯೯ರ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರ ಸ್ಮರಣಾರ್ಥ ಪ್ರತಿ ವರ್ಷ ಜುಲೈ ೨೬ ರಂದು ವಿಶೇಷ ನಮನ ಸಲ್ಲಿಸಲಾಗುತ್ತದೆ. ಬೆಂಗಳೂರಿನ ನೆಹರೂ ತಾರಾಲಯದ ರಾಷ್ಟ್ರೀಯ ಸೈನಿಕ ಸ್ಮಾರಕದಲ್ಲಿ ಭಾನುವಾರ ನಡೆದ ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹುತಾತ್ಮ ಯೋಧರ ಸ್ಮರಣಾರ್ಥ ಸ್ಥಂಬಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ, ಯೋಧರ ಕುಟುಂಬಗಳ ಹಿತ ಕಾಯಲು ಸರ್ಕಾರ ಬದ್ಧವಾಗಿದೆ ಎಂದರು. ೨೬ ವರ್ಷಗಳ ಹಿಂದೆ ನಡೆದ ಯುದ್ಧದಲ್ಲಿ ನಮ್ಮ ತಾಯ್ನಾಡನ್ನು

ರಕ್ಷಿಸಲು ೫೨೭ ಯೋಧರು ಹುತಾತ್ಮರಾಗಿದ್ದಾರೆ. ಅದರಲ್ಲಿ ಕರ್ನಾಟಕದ ೧೩ ಯೋಧರು ಸೇರಿದ್ದಾರೆ. ಎಲ್ಲ ಪರಿಸ್ಥಿತಿಯಲ್ಲೂ ದೇಶದ ರಕ್ಷಣೆಗೆ ಬದ್ಧರಾಗಿದ್ದಾರೆ. ಭಾರತದ ರಕ್ಷಣಾ ಪಡೆಗೆ ಕರ್ನಾಟಕ ಬೆನ್ನೆಲುಬಾಗಿದೆ ಎಂದು ತಿಳಿಸಿದರು. ಡಿಆರ್‌ಡಿಒ ಇಸ್ರೋ ಸೇರಿದಂತೆ ಅನೇಕ ಸಂಸ್ಥೆಗಳು ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಭಾರತದ ಮೊದಲ ಸೇನಾ ಮುಖ್ಯಸ್ಥರಾದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ಕೊಡುಗೆ ಮರೆಯಲು ಸಾಧ್ಯವಿಲ್ಲ ಎಂದರು. ನಮ್ಮ ರಾಜ್ಯದಲ್ಲಿ ಲಕ್ಷಾಂತರ ಯೋಧರ ಕುಟುಂಬಗಳು ನೆಲೆಸಿದ್ದು, ಅವರ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ. ಅವರ ಸಲಹೆ ಸ್ವೀಕರಿಸಲು ಸರ್ಕಾರ ಮುಕ್ತವಾಗಿದೆ ಎಂದು ತಿಳಿಸಿದರು. ಈ ವೇಳೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಸೇನೆ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ಧಾರವಾಡದಲ್ಲಿ ಜಿಲ್ಲಾಡಳಿತ ಹಾಗೂ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಕಾರ್ಗಿಲ್ ವಿಜಯ ದಿವಸದ ಅಂಗವಾಗಿ ಹುತಾತ್ಮ ಯೋಧರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಜಿಲ್ಲಾಧಿಕಾರಿ ಕಚೇರಿ ಬಳಿಯಿರುವ ಕಾರ್ಗಿಲ್ ಸ್ತೂಪದಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರ ನೇತೃತ್ವದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಸದಸ್ಯರು ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳು ಹುತಾತ್ಮ ವೀರಯೋಧರಿಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸೈನಿಕ ಪರಶುರಾಮ ನವಲಗುಂದ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡರು.

(ಧ್ವನಿ-ಪರಶುರಾಮ ನವಲಗುಂದ)

<><><><>

ರಾಜ್ಯದ ವಿವಿಧೆಡೆ ಮತದಾರರ ಸಮಗ್ರ ಪಟ್ಟಿ ಪರಿಷ್ಕರಣೆ ಮುಂದುವರೆದಿದೆ. ಚಿಕ್ಕಮಗಳೂರು ನಗರದ ವಿಜಯಪುರ ಬಡಾವಣೆಯ ಕೆಲ ಮನೆಗಳಿಗೆ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಭೇಟಿ ನೀಡಿ ಎಸ್.ಐ.ಆರ್ ಪ್ರಕ್ರಿಯೆ ಮತದಾರರ ಪಟ್ಟಿ ಬಗ್ಗೆ ಮಾಹಿತಿ ಪಡೆದುಕೊಂಡರು. ನಂತರ ಮಾತನಾಡಿದ ಅವರು ಯಾವುದೇ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗಬಾರದು ಎಂಬುದು ಎಸ್.ಐ.ಆರ್ ಪ್ರಕ್ರಿಯಯ ಮೂಲ ಉದ್ದೇಶವಾಗಿದೆ. ನಮ್ಮ ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನು ಮತ್ತಷ್ಟು ಪಾರದರ್ಶಕ ಹಾಗೂ ಬಲಪಡಿಸುವಲ್ಲಿ ಈ ಅಭಿಯಾನವು ಮಹತ್ತರ ಪಾತ್ರ ವಹಿಸುತ್ತಿದೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶೇಕಡ ೮೨.೧೦ರಷ್ಟು ಮಾಹಿತಿ ಗಣಕೀಕರಣ ಮಾಡಲಾಗಿದೆ. ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಶಾಸಕ ಧೀರಜ್ ಮುನಿರಾಜು, ಮನೆಗಳಿಗೆ ಭೇಟಿ ನೀಡಿ, ಮತದಾರರ ಗಣತಿ ನಮೂನೆಗಳನ್ನು ವೀಕ್ಷಿಸಿದರು. ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಯಾವುದೇ ಲೋಪಗಳಾಗದಂತೆ ಎಚ್ಚರಿಕೆ ವಹಿಸಬೇಕು. ಅರ್ಹ ಮತದಾರರು ಮತದಾರರ ಪಟ್ಟಿ ಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕಿದೆ ಎಂದು ಅವರು ಸೂಚಿಸಿದರು. ಕೋಲಾರ ಜಿಲ್ಲೆಯಲ್ಲಿ ೧೦ ಲಕ್ಷದ ೪೭

ಸಾವಿರದ  ೩೧೪ ನಮೂನೆಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಒಟ್ಟು ೬ ಸಾವಿರದ ೭೭ ಮತದಾರರು ಆನ್‌ಲೈನ್ ಮೂಲಕ ಸ್ವಯಂ ದಾಖಲಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಪ್ರಕಟಣೆ ತಿಳಿಸಿದೆ.

<><><><>

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಪ್ರಮುಖ ಜಂಕ್ಷನ್‌ಗಳಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸಿ, ಸಾರ್ವಜನಿಕರಿಗೆ ಸುಗಮ ಮತ್ತು ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಆಯುಕ್ತ ಡಿ.ಎಸ್.ರಮೇಶ್ ಮತ್ತು ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ ಇಂದು ವಿವಿಧ ಪ್ರಮುಖ ಜಂಕ್ಷನ್‌ಗಳಲ್ಲಿ ಸ್ಥಳ ಪರಿಶೀಲನೆ ನಡೆಸಿದರು. ರಸ್ತೆ ಮೂಲಸೌಕರ್ಯ ಅಭಿವೃದ್ಧಿ, ಕೆಳಸೇತುವೆ ನಿರ್ಮಾಣ ಸೇರಿದಂತೆ ಸಂಚಾರ ದಟ್ಟಣೆ ನಿವಾರಣೆಗೆ ಅಗತ್ಯವಾದ ಶಾಶ್ವತ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಅಗತ್ಯ ನಿರ್ದೇಶನಗಳನ್ನು ನೀಡಿದರು.

<><><><>

ಕೋಲಾರ ಜಿಲ್ಲೆ ಕೆಜಿಎಫ್ ತಾಲೂಕಿನ ಗೋಪಿಯನಹಳ್ಳಿಯಲ್ಲಿ ಆಹಾರ ಸುರಕ್ಷತೆ ಹಾಗೂ ಪೊಲೀಸ್ ಇಲಾಖೆ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ, ಸುಮಾರು ೧೦೦ ಲೀಟರ್ ಕಲಬೆರಕೆ ಹಾಲನ್ನು ಜಪ್ತಿ ಮಾಡಿ ಸ್ಥಳದಲ್ಲೇ ನಾಶಪಡಿಸಲಾಗಿದೆ. ಜಿಲ್ಲಾಧಿಕಾರಿಯ ನಿರ್ದೇಶನದ ಮೇರೆಗೆ ಜಿಲ್ಲಾ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿ ಡಾ. ರಾಕೇಶ್ ಅವರ ಮಾರ್ಗದರ್ಶನದಲ್ಲಿ ಈ ದಿಢೀರ್ ದಾಳಿ ಕೈಗೊಳ್ಳಲಾಗಿದೆ. ದಾಳಿ ನಡೆಸಿದ ಅಧಿಕಾರಿಗಳ ತಂಡ, ಒಟ್ಟು ೫ ಹಾಲು ಕ್ಯಾನ್‌ಗಳಲ್ಲಿದ್ದ ೧೦೦ ಲೀಟರ್ ಕಲಬೆರಕೆ ಹಾಲನ್ನು ವಶಕ್ಕೆ ಪಡೆದು ನಾಶಪಡಿಸಿದೆ. ಸ್ಥಳದಲ್ಲಿ ಹಾಲು ಮತ್ತು ಕಲಬೆರಕೆಗೆ ಬಳಸಲಾಗುತ್ತಿದ್ದ ನೀರಿನ ಮಾದರಿಗಳನ್ನು ಸಂಗ್ರಹಿಸಿ, ಹೆಚ್ಚಿನ ತಪಾಸಣೆಗಾಗಿ ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಅಧಿಕಾರಿಗಳು, ಇಂತಹ ಅಕ್ರಮ ಚಟುವಟಿಕೆಗಳ ವಿರುದ್ಧ ಮುಲಾಜಿಲ್ಲದೇ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>